**ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 595/2019**

| | | | |
|---|---|---|---|
| **ಹೆಸರು** | **:** | **ಜಾಕೀರ ಪಟೇಲ** | ಚಾ.ಸಾ.7 |
| **ತಂದೆಯ ಹೆಸರು** | **:** | **ಲಾಡ್ಲೆ ಪಟೇಲ** | ಪ್ರಾ.ಸಾ.6 |
| **ವಯಸ್ಸು** | **:** | **52 ವರ್ಷ** | ದಿನಾಂಕಃ 06-11-2025 |
| **ಉದ್ಯೋಗ** | **:** | **ಒಕ್ಕಲುತನ** | |
| **ವಾಸಸ್ಥಳ** | **:** | **ಹೂಲ್ಸಗೂಡ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಚಾಸಾ-1, 4, 5, 6 ರವರು ನನಗೆ ಗೊತ್ತು. ಆರೋಪಿ ನನಗೆ ಗೊತ್ತು. ಆರೋಪಿ ಈಗ ಎಲ್ಲಿದ್ದಾರೆಂದು ನನಗೆ ಗೊತ್ತಿಲ್ಲ.

ನಾನು ಯಾವುದೇ ಜಗಳವನ್ನು ನೋಡಿಲ್ಲ ಮತ್ತು ಬಿಡಿಸಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಹೇಳಿಕೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಸಹಾಯಕ ಸರಕಾರಿ ಅಭಿಯೋಜಕರು ಸಾಕ್ಷಿ ನೀಡಿರುವ ಹೇಳಿಕೆಯನ್ನು ಸಾಕ್ಷಿಗೆ ಓದಿ ಹೇಳಿದಾಗ ಸಾಕ್ಷಿ ಅದರಲ್ಲಿರುವ ಸಂಗತಿಗಳು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ಎಲ್ಲಾ ಗೊತ್ತಿದ್ದರು ಆರೋಪಿಯ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**